ಅಧ್ಯಕ್ಷರು: ಈಗ ಸದನವನ್ನು ಮಧ್ಯಾಹ್ನ 3.30 ಗಂಟೆಗೆ ಸೇರುವಂತೆ ಮುಂದೂಡಲಾಗಿದೆ.

(ಸದನವು ಮಧ್ಯಾಹ್ನ 2:23 ಗಂಟೆಗೆ ಮುಕ್ತಾಯಗೊಂಡು, ಮತ್ತೆ ಮಧ್ಯಾಹ್ನ 3.30 ಗಂಟೆಗೆ ಸೇರಲು ನಿಶ್ಚಯಿಸಿತು)

ಸದನವು ಪುನಃ ಮಧ್ಯಾಹ್ನ 3 ಗಂಟೆ 45 ನಿಮಿಷಕ್ಕೆ ಸಮಾವೇಶಗೊಂಡಿತು

ಮಾನ್ಯ ಸಭಾಧ್ಯಕ್ಷರಾದ ಶ್ರೀ ಜಗದೀಶ್ ಶೆಟ್ಟರ್‌ರವರು ಪೀಠವನ್ನಲಂಕರಿಸಿದ್ದರು

5. ಪ್ರಕಟಣೆ

ವಿಷಯ: ದಿನಾಂಕ 10–06–2008 ರಂದು ಶ್ರೀ ಸಿ.ಪಿ. ಯೋಗೇಶ್ವರ್, ಶಾಸಕರು, ಚನ್ನಪಟ್ಟಣ ವಿಧಾನಸಭಾ ಕ್ಷೇತ್ರ ಇವರನ್ನು ಹಾಗೂ ಅವರ ಬೆಂಬಲಿಗರನ್ನು ಪ್ರತಿಭಟನಾ ರ‍್ಯಾಲಿಯಲ್ಲಿ ಬಂದಿಸಿ ಬಿಡುಗಡೆ ಮಾಡಿರುವ ಬಗ್ಗೆ

ಅಧ್ಯಕ್ಷರು: ವಿಧಾನ ಸಭಾ ಸದಸ್ಯರಾದ ಶ್ರೀ ಸಿ.ಪಿ. ಯೋಗೀಶ್ವರ್‌ರವರು ದಿನಾಂಕ: 10–06–2008 ರಂದು ತಮ್ಮ ಬೆಂಬಲಿಗರೊಂದಿಗೆ ಸರ್ಕಾರದಿಂದ ರೈತರಿಗೆ ಸರಿಯಾಗಿ ರಸಗೊಬ್ಬರವನ್ನು ವಿತರಣೆ ಮಾಡದಿರುವ ವಿಷಯದಲ್ಲಿ ಹಾಗೂ ಹಾವೇರಿ ಜಿಲ್ಲೆಯಲ್ಲಿ ಪ್ರತಿಭಟನಾ ನಿರತ ರೈತರ ಮೇಲೆ ಪೊಲೀಸ್ ಗೋಲಿಬಾರ್ ಅನ್ನು ಖಂಡಿಸಿ ರಾಮನಗರ ಜಿಲ್ಲೆಯ ಚನ್ನಪಟ್ಟಣದಲ್ಲಿ ರಸ್ತೆ ತಡೆ ಹಾಗೂ ಪ್ರತಿಭಟನೆ ನಡೆಸಿದ್ದರಿಂದ ವಾಹನ ಸಂಚಾರಕ್ಕೆ ಮತ್ತು ಸಾರ್ವಜನಿಕರ ಓಡಾಟಕ್ಕೆ ತೊಂದರೆಯುಂಟಾದ ಹಿನ್ನಲೆಯಲ್ಲಿ ಸದರಿಯವರನ್ನು ಹಾಗೂ 50 ಜನ ಅವರ ಬೆಂಬಲಿಗರನ್ನು ಕರ್ನಾಟಕ ಪೊಲೀಸ್ ಕಾಯ್ದೆ ಕಲಂ 71ರ ಮೇರೆಗೆ ರಾತ್ರಿ 8 ಗಂಟೆಗೆ ಬಂಧಿಸಿ, ಅದೇ ದಿನ ರಾತ್ರಿ 8.15 ಗಂಟೆಗೆ ಬಿಡುಗಡೆ ಮಾಡಲಾಗಿರುತ್ತದೆಂದು ಪೊಲೀಸ್ ಅಧೀಕ್ಷಕರು, ರಾಮನಗರ ಜಿಲ್ಲೆ ಅವರು ತಿಳಿಸಿರುತ್ತಾರೆಂದು ಈ ಮೂಲಕ ಮಾನ್ಯ ಸದಸ್ಯರಿಗೆ ತಿಳಿಯಪಡಿಸಲಾಗಿದೆ.

6. ನಿಯಮ 69ರ ಮೇರೆಗೆ ಮುಂದುವರೆದ ಚರ್ಚೆ

ವಿಷಯ: ರಾಜ್ಯದಲ್ಲಿ ಉಂಟಾಗಿರುವ ರಸಗೊಬ್ಬರದ ತೀವ್ರ ಅಭಾವದ ಬಗ್ಗೆ

ಶ್ರೀ ಟಿ.ಬಿ. ಜಯಚಂದ್ರ (ಸಿರಾ) : ಇವತ್ತು ಬೀಜ ಮತ್ತು ರಸಗೊಬ್ಬರವನ್ನು ರೈತರಿಗೆ ಸರಬರಾಜು ಮಾಡುವಲ್ಲಿ ವಿಳಂಬವಾಯಿತೆನ್ನುವ ಕಾರಣಕ್ಕೋಸ್ಕರ ಏನೆಲ್ಲ